115
25-7-19

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 765

ಸದಸ್ಯರ ಹೆಸರು : ಶ್ರೀ ಲಹರ್ ಸಿಂಗ್ ಸಿರೋಯಾ

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	ಎಲೆಕ್ಟ್ರಿಕ್ ಬಸ್‌ಗಳನ್ನು ಚಲಾಯಿಸಲು ಕೇಂದ್ರ ಸರ್ಕಾರ ಸಬ್ಸಿಡಿ ನೀಡುವ ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ: (ವಿವರವನ್ನು ನೀಡುವುದು)	FAME-II ಯೋಜನೆಯಡಿಯಲ್ಲಿ ರಾಜ್ಯ ಸಾರಿಗೆ ಸಂಸ್ಥೆಗಳಲ್ಲಿ ಎಲೆಕ್ಟ್ರಿಕ್ ಬಸ್‌ಗಳನ್ನು operational cost model basis ಅಡಿಯಲ್ಲಿ ಕಾರ್ಯಾಚರಣೆಗೊಳಿಸಲು ಕೇಂದ್ರ ಸರ್ಕಾರದ ಭಾರಿ ಕೈಗಾರಿಕೆಗಳು ಮತ್ತು ಸಾರ್ವಜನಿಕ ಉದ್ಯಮಗಳ ಸಚಿವಾಲಯದ ವತಿಯಿಂದ Demand incentive ನ್ನು ನೀಡುತ್ತಿದ್ದು, ಕ.ರಾ.ರ.ಸಾ.ನಿಗಮಕ್ಕೆ 70 ಎಲೆಕ್ಟ್ರಿಕ್ ಬಸ್‌ಗಳನ್ನು ಹಾಗೂ ಬೆಂ.ಮ.ಸಾ.ಸಂಸ್ಥೆಗೆ 500 ಎಲೆಕ್ಟ್ರಿಕ್ ಬಸ್‌ಗಳನ್ನು ಈ ಯೋಜನೆಡಿಯಲ್ಲಿ ನೀಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.
ಆ	ಈ ಹಿಂದೆ ಎಲೆಕ್ಟ್ರಿಕ್ ಬಸ್‌ಗಳಿಗೆ ಕೇಂದ್ರ ಸರ್ಕಾರ ನೀಡಿದ್ದ ಸಬ್ಸಿಡಿ ಹಣವನ್ನು ಉಪಯೋಗಿಸಿಕೊಳ್ಳಲು ಸರ್ಕಾರ ವಿಫಲವಾಗಿರುವುದು ನಿಜವೇ:	ಈ ಹಿಂದೆ ಎಲೆಕ್ಟ್ರಿಕ್ ಬಸ್‌ಗಳಿಗೆ ಕೇಂದ್ರ ಸರ್ಕಾರದಿಂದ ಬೆಂ.ಮ.ಸಾ.ಸಂಸ್ಥೆಗೆ 80 ವಾಹನಗಳ ಆಚರಣೆಗೆ ಸಬ್ಸಿಡಿ ಹಣವನ್ನು ನೀಡಿದ್ದು, ಸದರಿ ಟೆಂಡರ್‌ನಲ್ಲಿ ಕೆಲವೊಂದು ಅಂಶಗಳು ಸಂಸ್ಥೆಗೆ ಲಾಭದಾಯಕವಾಗಿಲ್ಲದ ಹಾಗೂ ಭಾದಕವಾಗಿದ್ದ ಕಾರಣ, ಟೆಂಡರ್‌ನಲ್ಲಿ ಆಯ್ಕೆಯಾದ ಕಂಪನಿಗೆ ನೀಡಿದ್ದ Letter of Intent ಅನ್ನು ರದ್ದುಗೊಳಿಸಿದ್ದರಿಂದ ಸಬ್ಸಿಡಿ ಹಣವನ್ನು ಉಪಯೋಗಿಸಲು ಸಾಧ್ಯವಾಗಿರುವುದಿಲ್ಲ.
ಇ	ಎಲೆಕ್ಟ್ರಿಕ್ ಬಸ್‌ನಂತಹ ಪರಿಸರ ಸ್ನೇಹಿ ಸಾರಿಗೆಯನ್ನು ಅನುಷ್ಠಾನಗೊಳಿಸಲು ಹಾಗೂ ವಿದ್ಯುತ್ ಚಾಲಿತ ಬಸ್ ಸೇವೆ ಅಳವಡಿಸಿಕೊಳ್ಳಲು ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮಗಳೇನು: (ವಿವರವನ್ನು ನೀಡುವುದು)	ವಿದ್ಯುತ್ ಚಾಲಿತ ವಾಹನಗಳನ್ನು ಕಾರ್ಯಚರಣೆ ಮಾಡಲು ಸೂಕ್ತ ಮಾರ್ಗಗಳನ್ನು ಗುರುತಿಸಲು ಕ್ರಮವಹಿಸಲಾಗುತ್ತಿದ್ದು, ಉಪ ಪ್ರಶ್ನೆ (ಅ)ರಲ್ಲಿ ಉತ್ತರಿಸಿರುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಸಂಖ್ಯೆ: ಟಿಡಿ 47 ಟಿಸಿಕ್ಯೂ 2019

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿ ಹಾಗೂ
ಸಾರಿಗೆ ಸಚಿವರು